ಕರ್ನಾಟಕ ಸರ್ಕಾರ

ಸಂ.ಎಎಲ್ಎನ್(ಪೂ)ಎಸ್.ಆರ್:1893/2015-16.

ಜಿಲ್ಲಾಧಿಕಾರಿಗಳ ಕಾರ್ಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ
ಬೆಂಗಳೂರು, ದಿನಾಂಕ 23.01.2016

-: ಅಧಿಕೃತ ಜ್ಞಾಪನ :-

ವಿಷಯ:- **ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರ ಹೋಬಳಿ, ಹೂಡಿ ಗ್ರಾಮದ ಸರ್ವೆ ನಂ. 103/1, ರಲ್ಲಿ 1-20 ಎಕರೆ-ಗುಂಟೆ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀಮತಿ. ವಿಜಯಲಕ್ಷ್ಮಿ ಕೋಂ. ಕೃಷ್ಣಾರೆಡ್ಡಿ. ಎನ್. ರವರು ಹೂಡಿ ಗ್ರಾಮ, ಕೆ.ಆರ್.ಪುರ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು** ರವರು ಅರ್ಜಿ ಸಲ್ಲಿಸಿರುವ ದಿನಾಂಕ 03.12.2015

1. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ : 18.01.1994
2. ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ:56:ಎಲ್‌ಜಿಪಿ/2004 ದಿನಾಂಕ:03.01.1994 ಮತ್ತು 05.01.1994.
3. ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು ,ರವರ ವರದಿ ಸಂಖ್ಯೆ: ಎಎಲ್‌ಎನ್(ಪೂ) ಸಿ.ಆರ್. 936/16-07 ದಿನಾಂಕ 22.12.2015.
4. ಭೂ ಪರಿವರ್ತನಾ ಶುಲ್ಕ ರೂ. 83,100-00 ಹಾಗೂ ಪೋಡಿ ಶುಲ್ಕ ರೂ 55-00 ಒಟ್ಟು ರೂ. 83,155-00 ಗಳನ್ನು ಚೆಲನ್ ನಂ. 17 & 18 ರಂತೆ ದಿನಾಂಕ 04.07.205 ರಂತೆ ದಿನಾಂಕ 30.12.2015 ರಂದು ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಆರ್.ಪುರ ಶಾಖೆ, ಬೆಂಗಳೂರು ಇಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ. 54,400-00 ( ಐವತ್ನಾಲ್ಕು ಸಾವಿರದ ನಾಲ್ಕುನೂರು ರೂಪಾಯಿ ಮಾತ್ರ ) ಗಳಂತೆ ಅರ್ಜಿದಾರರು ಉಲ್ಲೇಖ(4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ, ಅರ್ಜಿದಾರರಾದ **ಶ್ರೀಮತಿ. ವಿಜಯಲಕ್ಷ್ಮಿ ಕೋಂ. ಕೃಷ್ಣಾರೆಡ್ಡಿ. ಎನ್.** ರವರು **ಹೂಡಿ ಗ್ರಾಮ, ಕೆ.ಆರ್.ಪುರ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು** ರವರ ಅರ್ಜಿಯನ್ನು ಪರಿಗಣಿಸಿ **ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರ ಹೋಬಳಿ, ಹೂಡಿ ಗ್ರಾಮದ ಸರ್ವೆ ನಂ. 103/1, ರಲ್ಲಿ 1-20 ಎಕರೆ-ಗುಂಟೆ ವಿಸ್ತೀರ್ಣದ ವ್ಯವಸಾಯದ** ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೇ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿಎಂಆರ್‌ಡಿಎ/(ಸ್ಥಳೀಯ ಯೋಜನಾ ಪ್ರಾಧಿಕಾರ)/ಬಿಎಂಐಸಿಎಪಿಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಪರಿವರ್ತಿತ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಿಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ ಬಿಐಎಪಿಎ/ಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ/ಪ್ರಾಧಿಕಾರರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

..2ಕ್ಕೆ,

Scanned by CamScanner

4. ಭೂಪರಿವರ್ತನೆ ಕೋರಿರುವ ಜಮೀನಿನಲ್ಲಿ ಮೂಲಭೂತ ಸೌಯರ್ಕಗಳಿಗೆ ನಿಗಧಿಪಡಿಸಲಾದ ಅಂದರೆ ರಸ್ತೆ ಜಾಗ, ರಸ್ತೆ, ಮಾರ್ಜಿನ್, ಉದ್ಯಾನವನ, ಸಿ.ಎ.ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ/(ಸ್ಥಳೀಯ ಯೋಜನಾ ಪ್ರಾಧಿಕಾರ)/ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿದ ನಡಾವಳಿ ನಕ್ಷೆ ಪ್ರಕಾರ ಹಾಗೂ ನಿರ್ಧಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿ ಸಕ್ಷಮ ಪ್ರಾಧಿಕಾರಗಳಿಗೆ ಪರಿತ್ಯಾತ ಪತ್ರ (Relinquish Deed) ಹಾಗೂ ಸ್ಥಳೀಯ ಯೋಜನಾ ಪ್ರಾಧಿಕಾರ ವಿಧಿಸಿರುವ ಷರತ್ತುಗಳಿಗೊಳಪಟ್ಟಿರುತ್ತದೆ.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು / ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ / ಉಪನೊಂದಣಾಧಿಕಾರಿಗಳಿಂದ ನೋಂದಾವಣಿ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಜಮೀನಿಗೆ ಪೂರಾ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದ್ದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ ಕುಡಿಯುವ ನೀರು ರಸ್ತೆ, ಸರಬರಾಜು ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಈ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ತಾಕು ಪೋಟ್ ಖರಾಬ್ ಜಮೀನು ಇದ್ದಲ್ಲಿ, ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 67ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556-665 ಆರ್. ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ1/7(11)67, ದಿನಾಂಕ : 01.01.1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳನ್ನು ಹೊರದೊಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ವಾಸದ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ / ಮೇಲ್ಮನವಿ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪರಿಷ್ಕೃತ ಮಾಸ್ಟರ್ ಪ್ಲಾನ್ -2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಕೈಗೊಳ್ಳಬಾರದು.

13. ಉದ್ದೇಶಿತ ಜಾಗದಲ್ಲಿ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

14. ಪ್ರಶ್ನಿತ ಜಮೀನು ಸರ್ಕಾರದಿಂದ ಮಂಜೂರಾದ ಯಾವುದೇ ಸರ್ಕಾರಿ ಜಮೀನಾಗಿದ್ದಲ್ಲಿ ಪಕ್ಕಾ ಪೋಡಿಯಾಗದ ಮತ್ತು ಪಕ್ಕಾ ಪೋಡಿ ಮಾಡಿಸಿಕೊಳ್ಳದೇ ತಪ್ಪು ಮಾಹಿತಿ ನೀಡಿ ಭೂ ಪರಿವರ್ತನೆ ಆದೇಶ ಪಡೆದಿದು ಕಂಡು ಬಂದಲ್ಲಿ ಸದರಿ ಆದೇಶವನ್ನು ರದ್ದುಗೊಳಿಸಲಾಗುವುದು.

3

Scanned by CamScanner

## ಷೆಡ್ಯೂಲ್ ವಿವರ.

ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರ ಹೋಬಳಿ, ಹೂಡಿ ಗ್ರಾಮದ ಸರ್ವೆ ನಂ. 103/1, ರಲ್ಲಿ 1–20 ಎಕರೆ–ಗುಂಟೆ ವಿಸ್ತೀರ್ಣದ ಜಮೀನಿಗೆ ಚಕ್ಕುಬಂದಿ:–

| ಚಕ್ಕುಬಂದಿ: | | ಸರ್ವೆ ನಂ. | ವಿಸ್ತೀರ್ಣ. |
|---|---|---|---|
| ಪೂರ್ವಕ್ಕೆ | ಸರ್ವೆ ನಂ. 103/2 | 103/1 | 1–20 ಎ/ಗುಂ. |
| ಪಶ್ಚಿಮಕ್ಕೆ | ಸರ್ವೆ ನಂ. 100 | | |
| ಉತ್ತರಕ್ಕೆ | ಸರ್ವೆ ನಂ. 99/3 | | |
| ದಕ್ಷಿಣಕ್ಕೆ | ಬೇರೆಯವರ ಸ್ವತ್ತು. | | |

ಜಿಲ್ಲಾಧಿಕಾರಿ ಕಛೇರಿ ಬೆಂಗಳೂರು ನಗರ ಜಿಲ್ಲೆ

ಸಹಿ,
ವಿ.ಶಂಕರ್
ಜಿಲ್ಲಾಧಿಕಾರಿಗಳು (ಕಂ)
ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ/ ಮಾಹಿತಿಗಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ:–

1. ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ರವರಿಗೆ ಮೇಲ್ಕಂಡ ಅಧಿಕೃತ ಜ್ಞಾಪನ ಮತ್ತು ಚಲನ್ ಮತ್ತು ಕರಾರು ಪತ್ರದೊಂದಿಗೆ ಕಳುಹಿಸುತ್ತಾ. ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂ. ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿಯಲ್ಲಿ ಕೂಡಲೇ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3. ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪ ವಿಭಾಗ, ಬೆಂಗಳೂರು.
4. ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5. ಉಪ ನೊಂದಣಾಧಿಕಾರಿಗಳು ಕೆ.ಆರ್.ಪುರ, ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6. ಅರ್ಜಿದಾರರಾದ ಶ್ರೀಮತಿ. ವಿಜಯಲಕ್ಷ್ಮಿ ಕೋಂ. ಕೃಷ್ಣಾರೆಡ್ಡಿ. ಎನ್. ರವರು ಹೂಡಿ ಗ್ರಾಮ, ಕೆ.ಆರ್.ಪುರ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ ಮಾಹಿತಿಗಾಗಿ.
7. ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು (ಕಂ)
ಬೆಂಗಳೂರು ಜಿಲ್ಲೆ, ಬೆಂಗಳೂರು

ಜಿಲ್ಲಾ ಧಿಕಾರಿಗಳು
ಬೆಂಗಳೂರು ನಗರ ಜಿಲ್ಲೆ
ಬೆಂಗಳೂರು

Scanned by CamScanner